# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 315 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ |
| ಉತ್ತರಿಸುವ ದಿನಾಂಕ | : | 19-07-2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿನ ಎಷ್ಟು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ;</td><td>ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ಪರಿಶಿಷ್ಟ ಜಾತಿಯ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಕಟ್ಟಡಗಳ ವಿವರ ಈ ಕೆಳಕಂಡಂತಿದೆ.<br>
<table>
<tr><th>ಮೆಟ್ರಿಕ್ ಪೂರ್ವ/ ಮೆಟ್ರಿಕ್ ನಂತರ</th><th>ವಿದ್ಯಾರ್ಥಿ ನಿಲಯಗಳ ಸಂಖ್ಯೆ</th><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th><th>ನಿರ್ಮಾಣ ಹಂತ</th><th>ನಿವೇಶ ನ ಲಭ್ಯ</th><th>ನಿವೇಶನ ರಹಿತ</th></tr>
<tr><td>ಮೆಟ್ರಿಕ್ ಪೂರ್ವ</td><td>46</td><td>30</td><td>16</td><td>9</td><td>7</td><td>0</td></tr>
<tr><td>ಮೆಟ್ರಿಕ್ ನಂತರದ</td><td>30</td><td>15</td><td>15</td><td>6</td><td>8</td><td>1</td></tr>
<tr><td>ಒಟ್ಟು</td><td>76</td><td>45</td><td>31</td><td>15</td><td>15</td><td>1</td></tr>
</table></td></tr>
<tr><td>ಆ)</td><td>ಈ ಪೈಕಿ ಯಾವ ವಸತಿ ನಿಲಯಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿವೆ; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ;</td><td>ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ 31 ವಿದ್ಯಾರ್ಥಿ ನಿಲಯಗಳ ಪೈಕಿ, 15 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಮುಂದುವರೆದು, 15 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳು ಲಭ್ಯವಿದ್ದು, ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. ಬಾಕಿ 01 ವಿದ್ಯಾರ್ಥಿ ನಿಲಯಕ್ಕೆ ನಿವೇಶನ ಪಡೆಯುವುದು ಬಾಕಿ ಇದ್ದು, ಸೂಕ್ತ ನಿವೇಶನ ಪಡೆದ ನಂತರ ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು.</td></tr>
</table>

---2

| | | |
|---|---|---|
| ಇ) | ಸದರಿ ವಸತಿ ನಿಲಯಗಳಿಗೆ ನಿಗಧಿತ ಪ್ರಮಾಣದಲ್ಲಿ ಆಹಾರ ಸರಬರಾಜು ಆಗುತ್ತಿಲ್ಲವಾದ್ದರಿಂದ ವಸತಿ ನಿಲಯಗಳ ಮೇಲ್ವಿಚಾರಕರು ವಿದ್ಯಾರ್ಥಿಗಳನ್ನು ಸಮಾಧಾನ ಪಡಿಸಲು ಸಾಧ್ಯಯವಾಗುತ್ತಿಲ್ಲ ವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ,<br>ಈ ಸಂಬಂಧ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿದೆ.<br>1. ಇಲಾಖೆ ವತಿಯಿಂದ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ನಿಗಧಿತ ಅವಧಿಯಲ್ಲಿ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಸಕಇ 97 ಪಕವಿ 2023, ಬೆಂಗಳೂರು ದಿನಾಂಕ:28-07-2023 ರ ಆದೇಶದಲ್ಲಿ ಎ ಯಿಂದ ಹೆಚ್ ಗ್ರೂಪ್ ವಾರು ಟೆಂಡರ್ ಮೂಲಕ ಖರೀದಿ ಮಾಡಲು ಆದೇಶವಾಗಿದ್ದು ಹಾಗೂ ಆದೇಶದಲ್ಲಿ ವೇಳಾಪಟ್ಟಿ ತಯಾರಿಸಿ ಜನವರಿ 01 ರಿಂದ ಮಾರ್ಚ್ 10 ರೊಳಗೆ ನಿಗಧಿತ ಸಮಯದಲ್ಲಿ ಟೆಂಡರ್ ಕರೆಯಲು ಸರ್ಕಾರ ಕ್ರಮ ತೆಗೆದು ಕೊಂಡಿದೆ. |
| ಈ) | ವಸತಿ ನಿಲಯಗಳಿಗೆ ಸರಬರಾಜು ಮಾಡುವ ಟೆಂಡರ್ ಪ್ರಕ್ರಿಯೆಯು ನಿಗದಿತ ಸಮಯದಲ್ಲಿ ನಡೆಯದೆ ಇರುವುದರಿಂದ ನಿಗದಿತ ಸಮಯದಲ್ಲಿ ನಡೆಸಲು ಯಾವ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ: (ಸಂಪೂರ್ಣ ಮಾಹಿತಿ ನೀಡುವುದು) | 2. ಸರ್ಕಾರದ ಆದೇಶ ಸಂಖ್ಯೆ:ಸಕಇ-ಎಂಡಿಎಸ್/425/2022, ದಿನಾಂಕ:14-03-2024 ರ ಆದೇಶದಲ್ಲಿ ವಿದ್ಯಾರ್ಥಿಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು 2024-25 ನೇ ಸಾಲಿನಿಂದ ಜಿಲ್ಲಾ ಮಟ್ಟದಲ್ಲಿ ಎರಡು ವರ್ಷಗಳ ಅವಧಿಗೆ ಜಿಲ್ಲಾವಾರು ಟೆಂಡರ್ ಆಹ್ವಾನಿಸಲಾಗಿರುತ್ತದೆ.<br>3. ಈಗಾಗಲೇ ರಾಯಚೂರು ಜಿಲ್ಲೆರವರು ದಿನಾಂಕ:07-06-2024 ರಂದು ಆಹಾರ ಟೆಂಡರ್ ಅಧಿಸೂಚನೆ ಹೊರಡಿಸಲಾಗಿದ್ದು, ದಿನಾಂಕ:10-07-2024 ರಂದು ಸ್ಯಾಂಪಲ್ಸ್ ಪಡೆಯಲಾಗಿದ್ದು, ದಿನಾಂಕ:15-07-2024 ರಂದು ತಾಂತ್ರಿಕ ಬಿಡ್ ನ್ನು ಕರೆದು, ಈ ತಿಂಗಳ ಕೊನೆಯಲ್ಲಿ ಟೆಂಡರ್ ಪ್ರಕ್ರಿಯೆಯು ಮುಕ್ತಾಯಗೊಳ್ಳಲಿದೆ. |
| ಉ) | ಇಲಾಖಾ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳಲ್ಲಿನ ಖಾಲಿಯಿರುವ ಮೇಲ್ವಿಚಾರಕ ಹುದ್ದೆಗಳನ್ನು ತುಂಬುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ? (ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಸಿ ವೃಂದದ ವಾರ್ಡನ್ ಹುದ್ದೆಗೆ ಆಯ್ಕೆಯಾದ 140 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ವಿದ್ಯಾರ್ಥಿ ನಿಲಯಗಳಲ್ಲಿನ ಗ್ರೂಪ್-ಸಿ ವೃಂದದ ವಾರ್ಡನ್ ಹುದ್ದೆಯ ನೇರ ನೇಮಕಾತಿ ಕೋಟಾದಡಿಯಲ್ಲಿ ಲಭ್ಯವಿರುವ 232 ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. |

**ಸಕಇ 222 ಎಸ್ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**